ಇ) ಹೌದು

ಈ) ಆಯವ್ಯಯದ ಲಭ್ಯತೆ ಹಾಗೂ ಪದ್ಯಾರ್ಥಿನಿಲಯದ ಪ್ರಾರಂಭದ ಅವಶ್ಯಕತೆಯ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಲಾಗುವುದು.

ಚಿಕ್ಕನಾಯಕನಹಳ್ಳಿ ಪುರಸಭೆಯಲ್ಲಿ ಪೌರಕಾರ್ಮಿಕರನ್ನು ನೇಮಕ ಮಾಡುವುದು.

2005(2493)

ಶ್ರೀ ಸಿ.ಬಿ.ಸುರೇಶ್‌ಬಾಬು(ಚಿಕ್ಕನಾಯಕನಹಳ್ಳಿ): ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಟ್ಟು ಉತ್ತರಿಸುವರೆ?

1. ಚಿಕ್ಕನಾಯಕನಹಳ್ಳಿ ಪುರಸಭೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು?

2. ಹಾಗಿಲ್ಲದಿದ್ದಲ್ಲಿ ಜನಸಂಖ್ಯೆಗನುಗುಣವಾಗಿ ಹೆಚ್ಚುವರಿ ಪೌರಕಾರ್ಮಿಕರನ್ನು ನೇಮಕಾತಿ ಮಾಡಿಕೊಳ್ಳಲು ಯಾವ ಕ್ರಮ ಕೈಗೊಳ್ಳಲಾಗಿದೆ?

3. ಹಾಗಿಲ್ಲದಿದ್ದಲ್ಲಿ ಜನಸಂಖ್ಯೆಗನುಗುಣವಾಗಿ ಹೆಚ್ಚುವರಿ ಪೌರಕಾರ್ಮಿಕರನ್ನು ನೇಮಕಾತಿ ಮಾಡಿಕೊಳ್ಳಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಂ.ಮಲ್ಲಿಕಾರ್ಜುನ ನಾಗಪ್ಪ (ಪೌರಾಡಳಿತ ರಾಜ್ಯ ಸಚಿವರು):

1. 17 (ಹದಿನೇಳು)

2. ಇಲ್ಲ.

3. ಪುರಸಭೆಯವರು ಸ್ವಚ್ಛತಾ ಕೆಲಸವನ್ನು ಗುತ್ತಿಗೆ ಆಧಾರದ ಮೇಲೆ ನಿರ್ವಹಿಸಲು ಸರ್ಕಾರ ಸುತ್ತೋಲೆ ಸಂಖ್ಯೆ:ಪನಇ 168 ಜಿಇಎಲ್ 93 ದಿನಾಂಕ:19-11-93ರಲ್ಲಿ ನಿರ್ದೇಶನ ನೀಡಿದೆ.

ಬೆಳಗಾವಿ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ಅಭಿವೃದ್ಧಿ ನಿಗಮದಿಂದ ಹಮ್ಮಿಕೊಂಡ ಯೋಜನೆಗಳು.

2006(2499)

ಶ್ರೀ ಉಮೇಶ್ ವಿಶ್ವನಾಥ ಕತ್ತಿ(ಹುಕ್ಕೇರಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಅಭಿವೃದ್ಧಿ ನಿಗಮದಿಂದ ಕಳೆದ ಐದು ವರ್ಷದಲ್ಲಿ ಹಮ್ಮಿಕೊಂಡ ಕಾರ್ಯಕ್ರಮಗಳೇನು?

ಬ) ಈ ಯೋಜನೆ ಅಡಿಯಲ್ಲಿ ಬೆಳಗಾವಿ ಜಿಲ್ಲೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ?

ಕ) ಅನುದಾನ ಬಿಡುಗಡೆ ಮಾಡಿದ್ದಲ್ಲಿ ತಾಲ್ಲೂಕುವಾರು ವಿವರ ನೀಡುವುದು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು): ಅ) ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮವು 2000-01ನೇ ಸಾಲಿನಲ್ಲಿ ಬೆಳಗಾಂ ಜಿಲ್ಲೆಯಲ್ಲಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿದೆ:

1) ಗಂಗಾ ಕಲ್ಯಾಣ ಯೋಜನೆ

2) ಸಾಮೂಹಿಕ ನೀರಾವರಿ ಯೋಜನೆ

3) ವೈಯಕ್ತಿಕ ನೀರಾವರಿ ಕೊಳವೆಬಾವಿ ಯೋಜನೆ

4) ಪಂಪ್ ನೀರಾವರಿ ಯೋಜನೆ

5) ಭೂ ಒಡೆತನ ಯೋಜನೆ

6) ಸ್ವಯಂ ಉದ್ಯೋಗ ಯೋಜನೆ

7) ದೀನದಯಾಳುವರಿ ಮನೆ ಮತ್ತು ಕೊಟ್ಟಿಗೆ ನಿರ್ಮಾಣ

8) ಸಫಾಯಿ ಕರ್ಮಚಾರಿ ಪುನರ್ವಸತಿ ಯೋಜನೆ.

ಬ) ಈ ಯೋಜನೆ ಅಡಿಯಲ್ಲಿ ಕರ್ನಾಟಕ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದಿಂದ ಬೆಳಗಾವಿ ಜಿಲ್ಲೆಗೆ ರೂ.386.98 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಇ) ಬೆಳಗಾಂ ಜಿಲ್ಲೆಗೆ ಕರ್ನಾಟಕ ಪರಿಶಿಷ್ಟ ಜಾತಿ : ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದಿಂದ ನಿಗದಿಪಡಿಸಿದ ಗುರಿಗೆ ತಕ್ಕಂತೆ ಹಣ ಬಿಡುಗಡೆ ಮಾಡಿದ್ದು ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.

	ತಾಲ್ಲೂಕು		
1)	ಅಥಣಿ	20.58	
2)	ರಾಯಭಾಗ್	132.28	
3)	ಚಿಕ್ಕೋಡಿ	38.69	
4)	ಹುಕ್ಕೇರಿ	11.73	
5)	ಬೆಳಗಾಂ	56.18	
6)	ಖಾನಾಪುರ	1.97	
7)	ಗೋಕಾಕ್	28.84	
8)	ಬೈಲಹೊಂಗಲ	27.70	
9)	ಸವದತ್ತಿ	46.47	
10)	ರಾಮದುರ್ಗ	22.54	
	ಒಟ್ಟು	ರೂ.386.98	ಲಕ್ಷಗಳು

ರಾಜ್ಯದಲ್ಲಿ ನಗರ ಯೋಜನೆ ಇಲಾಖೆಯ ಕಾರ್ಯಗಳು.

2007(2630)

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ(ಅಂಕೋಲ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಲ್ಲೆಲ್ಲಿ ನಗರ ಯೋಜನೆ ಇಲಾಖೆ ಇದೆ?